All India Radio: Bangalore
National Bulletin In Kannada
20.09.2025 : 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು :

- ಪ್ರಧಾನಿ ನರೇಂದ್ರ ಮೋದಿ ಇಂದು ಗುಜರಾತ್‌ಗೆ ಭೇಟಿ; ೧೮ ಸಾವಿರದ ೩೫೪ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
- ಅಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯಿಂದ ತಪ್ಪಾಗಿ ಮತದಾರರ ಹೆಸರು ತೆಗೆದುಹಾಕಿಲ್ಲ - ಚುನಾವಣಾ ಆಯೋಗ ಸ್ಪಷ್ಟನೆ
- ವಿಶ್ವಸಂಸ್ಥೆಯಲ್ಲಿ 'ಪ್ಯಾಲೆಸ್ತೇನ್ ಭಾಗವಹಿಸುವಿಕೆ' ನಿರ್ಣಯದ ಪರವಾಗಿ ಭಾರತ ಮತ
- ಏಷ್ಯಾ ಕಪ್ ಟಿ-೨೦ ಕ್ರಿಕೆಟ್; ಒಮಾನ್ ವಿರುದ್ಧ ಭಾರತಕ್ಕೆ ೨೧ ರನ್‌ಗಳ ಜಯ

************

ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಗುಜರಾತ್‌ಗೆ ಭೇಟಿ ನೀಡಲಿದ್ದು, 'ಸಮುದ್ರದಿಂದ ಸಮೃದ್ಧಿ' ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಭಾವನಗರದಲ್ಲಿ ೩೪ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಪ್ರಧಾನಿಯವರು ಧೋಲೇರಾದಲ್ಲಿ ವೈಮಾನಿಕ ಸಮೀಕ್ಷೆಯನ್ನು ಕೈಗೊಳ್ಳಲಿದ್ದಾರೆ. ಮಧ್ಯಾಹ್ನ, ಅವರು ಲೋಥಾಲ್‌ನಲ್ಲಿರುವ ರಾಷ್ಟ್ರೀಯ ಸಾಗರ ಪರಂಪರೆ ಸಂಕೀರ್ಣಕ್ಕೆ ಭೇಟಿ ನೀಡಲಿದ್ದಾರೆ. ಸಮುದ್ರ ವಲಯಕ್ಕೆ ಪ್ರಮುಖ ಉತ್ತೇಜನವಾಗಿ, ಪ್ರಧಾನ ಮಂತ್ರಿಯವರು ೭ ಸಾವಿರದ ೮೭೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಸಾಗರ ವಲಯಕ್ಕೆ ಸಂಬಂಧಿಸಿದ ಬಹು ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ಇಂದಿರಾ ಡಾಕ್‌ನಲ್ಲಿ ಮುಂಬೈ ಅಂತಾರಾಷ್ಟ್ರೀಯ ಕ್ರೂಸ್ ಟರ್ಮಿನಲ್ ಅನ್ನು ಪ್ರಧಾನಿ ಮೋದಿ ಉದ್ಘಾಟಿಸಲಿದ್ದಾರೆ. ಕೋಲ್ಕತ್ತಾದ ಶ್ಯಾಮ ಪ್ರಸಾದ್ ಮುಖರ್ಜಿ ಬಂದರಿನಲ್ಲಿ ಹೊಸ ಕಂಟೇನರ್ ಟರ್ಮಿನಲ್ ಮತ್ತು ಸಂಬಂಧಿತ ಸೌಲಭ್ಯಗಳು, ಪ್ಯಾರದೀಪ್ ಬಂದರಿನಲ್ಲಿ ಹೊಸ ಕಂಟೇನರ್ ಬರ್ತ್, ಸರಕು ನಿರ್ವಹಣಾ ಸೌಲಭ್ಯಗಳು, ಟ್ಯೂನ ಟೆಕ್ರಾ ಮಲ್ಟಿ-ಕಾರ್ಗೋ ಟರ್ಮಿನಲ್ ಮತ್ತು ಎನ್ನೋರ್‌ನ ಕಾಮರಾಜರ್ ಬಂದರಿನಲ್ಲಿ ಅಗ್ನಿಶಾಮಕ ಸೌಲಭ್ಯಗಳು ಮತ್ತು ಆಧುನಿಕ ರಸ್ತೆ ಸಂಪರ್ಕಕ್ಕೆ ಅವರು ಅಡಿಪಾಯ ಹಾಕಲಿದ್ದಾರೆ. ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿಯ ಬದ್ಧತೆಗೆ ಅನುಗುಣವಾಗಿ, ಪ್ರಧಾನಮಂತ್ರಿಯವರು ಗುಜರಾತ್‌ನಲ್ಲಿ ವಿವಿಧ ವಲಯಗಳಿಗೆ ಸಂಬಂಧಿಸಿದ ೨೬ ಸಾವಿರದ ೩೫೪ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಕೇಂದ್ರ ಮತ್ತು ರಾಜ್ಯ ಸರ್ಕಾರದ ಬಹು ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

************

ಯಾವುದೇ ವ್ಯಕ್ತಿ ಆನ್‌ಲೈನ್‌ನಲ್ಲಿ ಯಾವುದೇ ಮತವನ್ನು ಅಳಿಸಲು ಸಾಧ್ಯವಿಲ್ಲ ಎಂದು ಚುನಾವಣಾ ಆಯೋಗ ಪುನರುಚ್ಚರಿಸಿದೆ. ಕರ್ನಾಟಕದ ಅಳಂದ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಯಿಂದ ತಪ್ಪಾಗಿ ಮತದಾರರ ಹೆಸರನ್ನು ತೆಗೆದುಹಾಕಲಾಗಿಲ್ಲ ಎಂದು ಆಯೋಗ ತಿಳಿಸಿದೆ.

ಅನುಮಾನಾಸ್ಪದವಾಗಿ ಮತದಾರರ ಪಟ್ಟಿಯಿಂದ ಮತದಾರರ ಹೆಸರನ್ನು ತೆಗೆದುಹಾಕುವ ಪ್ರಯತ್ನದ ವಿರುದ್ಧ ಆಯೋಗವು ೨೦೨೩ ರಲ್ಲಿ ಎಫ್‌ಐಆರ್ ದಾಖಲಿಸಿದೆ. ಮತದಾರರ ನೋಂದಣಿ ನಿಯಮಗಳು, ೧೯೬೦ ರ ಪ್ರಕಾರ, ಬಾಧಿತ ವ್ಯಕ್ತಿಗೆ ನೋಟಿಸ್ ನೀಡದೆ ಮತ್ತು ಅವರ ಅಭಿಪ್ರಾಯವನ್ನು ಕೇಳಲು ಅವಕಾಶ ನೀಡದೆ, ಯಾವುದೇ ಹೆಸರನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುವುದಿಲ್ಲ ಎಂದು ಚುನಾವಣಾ ಆಯೋಗ ಸ್ಪಷ್ಟನೆ ನೀಡಿದೆ.

************

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ತಮ್ಮ ದೌರ್ಬಲ್ಯಗಳನ್ನು ಮರೆಮಾಚಲು ಸಾಂವಿಧಾನಿಕ ಸಂಸ್ಥೆಯ ಮೇಲೆ ಆರೋಪ ಮಾಡುತ್ತಿದ್ದಾರೆ ಎಂದು ಕೇಂದ್ರ ಸಚಿವ ಕಿರಣ್ ರಿಜಿಜು ಆರೋಪಿಸಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಪದೇ ಪದೆ ಚುನಾವಣೆಗಳಲ್ಲಿ ಸೋತ ನಂತರ ರಾಹುಲ್ ಗಾಂಧಿ ವ್ಯವಸ್ಥೆಯನ್ನು ದೂಷಿಸುತ್ತಾರೆ ಎಂದು ದೂರಿದರು. ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದೇಶದ ನಾಗರಿಕರು ನಿಂತಿದ್ದಾರೆ. ಬಡವರು, ರೈತರು ಮತ್ತು ಸಾಮಾನ್ಯ ಜನರು ಅವರನ್ನು ದೇಶದ ನಾಯಕ ಎಂದು ಪರಿಗಣಿಸುತ್ತಾರೆ. ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ದೇಶ ಗಮನಾರ್ಹ ಪ್ರಗತಿ ಸಾಧಿಸಿದೆ ಎಂದು ಸಚಿವ ಕಿರಣ್ ರಿಜಿಜು ಹೇಳಿದರು. ಚುನಾವಣಾ ಆಯೋಗವು ಮತದಾರರ ಹೆಸರುಗಳನ್ನು ತೆಗೆದುಹಾಕಿ ಅಕ್ರಮ ಎಸಗಿದೆ ಎಂದು ಆರೋಪಿಸಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರನ್ನು ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್ ಟೀಕಿಸಿದ್ದಾರೆ. ಪಾಟ್ನಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಹುಲ್‌ಗಾಂಧಿ ಸತ್ಯವನ್ನು ವಿರೂಪಗೊಳಿಸಿದ್ದಾರೆ ಎಂದು ಆರೋಪಿಸಿದರು. ೨೦೨೩ರ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ರಾಹುಲ್‌ಗಾಂಧಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ಮೇಲೆ ಆರೋಪಿಸಿದ್ದಾರೆ. ಆದರೆ ಆ ಸಮಯದಲ್ಲಿ ಅವರು, ಚುನಾವಣಾ ಸಮಿತಿಯ ಮುಖ್ಯಸ್ಥರಾಗಿರಲಿಲ್ಲ ಎಂದು ಸಚಿವ ರವಿಶಂಕರ್ ಪ್ರಸಾದ್ ಹೇಳಿದರು.

************

*ಸೇವೆ ಮತ್ತು ಸುಶಾಸನ, ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಂತ್ರದಿಂದ ಮಾರ್ಗದರ್ಶಿಸಲ್ಪಟ್ಟ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಸರ್ಕಾರ, ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು ಈ ವಿಶೇಷ ಸರಣಿ - 'ಸೇವಾ ಪರ್ವ'ದಲ್ಲಿ, ಕೇಂದ್ರ ಸರ್ಕಾರವು ಸಾರ್ವತ್ರಿಕ ಆರೋಗ್ಯ ವ್ಯಾಪ್ತಿಯನ್ನು ಹೇಗೆ ಬಲಪಡಿಸಿದೆ ಮತ್ತು ಗುಣಮಟ್ಟದ ಆರೋಗ್ಯ ಸೇವೆಗೆ ಪ್ರವೇಶವನ್ನು ಸುಧಾರಿಸಿದೆ ಎಂಬುದರ ಕುರಿತು ಒಂದು ವಿಶೇಷ ವರದಿ. ಕಳೆದ ೧೧ ವರ್ಷಗಳಲ್ಲಿ, ಪ್ರಧಾನಿ ನರೇಂದ್ರ ಮೋದಿಯವರ ಕ್ರಿಯಾತ್ಮಕ ನಾಯಕತ್ವದಲ್ಲಿ ಭಾರತದ ಆರೋಗ್ಯ ವ್ಯವಸ್ಥೆಯು ಆಳವಾದ ಪರಿವರ್ತನೆಗೆ ಒಳಗಾಗಿದೆ. ೨೦೧೮ ರಲ್ಲಿ, ನರೇಂದ್ರ ಮೋದಿ ಸರ್ಕಾರವು ವಿಶ್ವದ ಅತಿದೊಡ್ಡ ಆರೋಗ್ಯ ಕಾರ್ಯಕ್ರಮವಾದ ಆಯುಷ್ಮಾನ್ ಭಾರತ್-ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯನ್ನು ಪ್ರಾರಂಭಿಸಿತು.*

*ಈ ಯೋಜನೆಯು ಪ್ರತಿ ಕುಟುಂಬಕ್ಕೆ ವರ್ಷಕ್ಕೆ ೫ ಲಕ್ಷ ರೂಪಾಯಿಗಳ ಆರೋಗ್ಯ ರಕ್ಷಣೆಯನ್ನು ಒದಗಿಸುತ್ತದೆ. ಭಾರತದ ಜನಸಂಖ್ಯೆಯ ೪೦ ಪ್ರತಿಶತದಷ್ಟು ಜನರನ್ನು ಗುರಿಯಾಗಿಸಿಕೊಂಡು, ಈ ಯೋಜನೆಯು ೧೨ ಕೋಟಿಗೂ ಹೆಚ್ಚು ಕುಟುಂಬಗಳನ್ನು ಒಳಗೊಳ್ಳುತ್ತದೆ. ಇದು ಸುಮಾರು ೫೫ ಕೋಟಿ ವ್ಯಕ್ತಿಗಳಿಗೆ ಪ್ರಯೋಜನವನ್ನು ನೀಡುತ್ತದೆ. ಕಳೆದ ವರ್ಷ ಅಕ್ಟೋಬರ್ ೨೯ ರಂದು ನವದೆಹಲಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ೭೦ ವರ್ಷಕ್ಕಿಂತ ಮೇಲ್ಪಟ್ಟ ಎಲ್ಲಾ ವೃದ್ಧರನ್ನು 'ಆಯುಷ್ಮಾನ್ ವಯೋ ವಂದನ್ ಯೋಜನೆಯ ವ್ಯಾಪ್ತಿಗೆ ಸೇರಿಸಲು ಆಯುಷ್ಮಾನ್ ಭಾರತ್-ಪ್ರಧಾನಮಂತ್ರಿ ಜನ ಆರೋಗ್ಯ ಯೋಜನೆಯ ವಿಸ್ತರಣೆಯನ್ನು ಘೋಷಿಸಿದರು. ಆಯುಷ್ಮಾನ್ ಭಾರತ್ ಯೋಜನೆ ಕುರಿತು ಮಾಧ್ಯಮದೊಂದಿಗೆ ಮಾತನಾಡಿದ ಇಶಾನ್ ಶ್ರೀವಾಸ್ತವ, ಈ ಯೋಜನೆಯು ಕುಟುಂಬದ ಸದಸ್ಯರಿಗೆ ತಮ್ಮ ಜೇಬಿನಿಂದ ಖರ್ಚು ಉಳಿಸುವ ಮೂಲಕ ಚಿಕಿತ್ಸೆ ಪಡೆಯಲು ಸಹಾಯ ಮಾಡಿದೆ ಎಂದು ಹೇಳಿದರು. 'ಆಯುಷ್ಮಾನ್ ವಯೋ ವಂದನ್' ಯೋಜನೆಯ ನೋಂದಣಿಗೆ ಆಧಾರ್ ಮಾತ್ರ ಕಡ್ಡಾಯಗೊಳಿಸಲಾಗಿದ್ದು, ಈ ಯೋಜನೆಯು ೭೦ ವರ್ಷಕ್ಕಿಂತ ಮೇಲ್ಪಟ್ಟ ಜನರಿಗೆ ಸುಲಭ ಮತ್ತು ಪ್ರವೇಶಿಸಬಹುದಾದ ಆರೋಗ್ಯ ರಕ್ಷಣೆಯನ್ನು ಖಾತ್ರಿಗೊಳಿಸುತ್ತದೆ. ಪ್ರಧಾನಿ ನರೇಂದ್ರ ಮೋದಿಯವರ ದೂರದೃಷ್ಟಿಯ ನಾಯಕತ್ವದಲ್ಲಿ, ಸರ್ಕಾರ ಸಮಗ್ರ ಆರೋಗ್ಯ ರಕ್ಷಣಾ ಪರಿಸರ ವ್ಯವಸ್ಥೆಯನ್ನು ರಚಿಸಲು ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್, ಸಬ್ಕಾ ಪ್ರಯಾಸ್ ತತ್ವವನ್ನು ಯಶಸ್ವಿಯಾಗಿ ಕಾರ್ಯಗತಗೊಳಿಸಿದೆ.*

************

ತೆರಿಗೆ ರಚನೆಯನ್ನು ಸರಳಗೊಳಿಸುವ ಮತ್ತು ನಾಗರಿಕರ ಮೇಲಿನ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವತ್ತ ಒಂದು ಮಹತ್ವದ ಹೆಜ್ಜೆಯಾಗಿ, ಈ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಭಾಷಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳನ್ನು ಘೋಷಿಸಿದರು. ಹೊಸ ತೆರಿಗೆ ದರಗಳು ಇದೇ ಸೋಮವಾರದಿಂದ ಜಾರಿಗೆ ಬರಲಿವೆ. ಈ ಸುಧಾರಣೆಗಳು ಎಲೆಕ್ಟ್ರಾನಿಕ್ಸ್ ಉಪಕರಣಗಳ ವಲಯದ ಮೇಲೆ ಕೂಡ ಪರಿಣಾಮ ಬೀರಲಿದೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳ ಅಡಿಯಲ್ಲಿ ಈ ತರ್ಕಬದ್ಧಗೊಳಿಸುವಿಕೆಯು ಎಸಿ ಮತ್ತು ದೊಡ್ಡ ಟಿವಿಗಳಂತಹ ಎಲೆಕ್ಟ್ರಾನಿಕ್ ವಸ್ತುಗಳಿಗೆ ಬೇಡಿಕೆಯನ್ನು ಉತ್ತೇಜಿಸುವ ನಿರೀಕ್ಷೆಯಿದೆ. ಇದು ದೇಶೀಯ ಉತ್ಪಾದಕರಿಗೆ ಮಾರುಕಟ್ಟೆ ಗಾತ್ರವನ್ನು ವಿಸ್ತರಿಸುತ್ತದೆ. ಈ ಕ್ರಮವು ಪ್ಲಾಸ್ಟಿಕ್,

ವೈರಿಂಗ್, ಕೂಲಿಂಗ್ ವ್ಯವಸ್ಥೆ, ಎಲ್‌ಇಡಿ ಪ್ಯಾನೆಲ್ ಮತ್ತು ಅಸೆಂಬ್ಲಿ ಸೇವೆಗಳಲ್ಲಿ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಅವಕಾಶಗಳನ್ನು ಮತ್ತಷ್ಟು ವಿಸ್ತರಿಸುತ್ತದೆ.

************

ಪ್ಯಾಲೆಸ್ತೇನ್ ಅಧ್ಯಕ್ಷ ಮಹಮೂದ್ ಅಬ್ಬಾಸ್ ಅವರು ತಮ್ಮ ಮುಂಬರುವ ಉನ್ನತ ಮಟ್ಟದ ಅಧಿವೇಶನವನ್ನು ವಿಡಿಯೋ ಮೂಲಕ ಉದ್ದೇಶಿಸಿ ಮಾತನಾಡಲು ಅವಕಾಶ ನೀಡುವ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ ನಿರ್ಣಯದ ಪರವಾಗಿ ಭಾರತ ಮತ ಚಲಾಯಿಸಿದೆ. ಅಮೆರಿಕ, ಪ್ಯಾಲೆಸ್ತೇನ್ ಅಧಿಕಾರಿಗಳಿಗೆ ವೀಸಾ ನಿರಾಕರಿಸಿದ ನಂತರ ಮತ್ತು ಅವರ ವೈಯಕ್ತಿಕ ಭಾಗವಹಿಸುವಿಕೆಯನ್ನು ತಡೆಯುವ ಮೂಲಕ ಈ ನಿರ್ಣಯ ಬಂದಿದೆ. ೧೯೩ ಸದಸ್ಯರ ಸಾಮಾನ್ಯ ಸಭೆಯು ತನ್ನ ೮೦ ನೇ ಅಧಿವೇಶನದಲ್ಲಿ 'ಪ್ಯಾಲೆಸ್ತೇನ್ ಭಾಗವಹಿಸುವಿಕೆ' ಎಂಬ ಶೀರ್ಷಿಕೆಯ ನಿರ್ಣಯವನ್ನು ಅಂಗೀಕರಿಸಿತು. ೧೪೫ ರಾಷ್ಟ್ರಗಳು ಪರವಾಗಿ ಮತ ಚಲಾಯಿಸಿದವು, ಐದು ರಾಷ್ಟ್ರಗಳು ವಿರುದ್ಧವಾಗಿ ಮತ ಚಲಾಯಿಸಿದವು ಮತ್ತು ಆರು ರಾಷ್ಟ್ರಗಳು ಗೈರುಹಾಜರಾದವು. ಅಮೆರಿಕ ಮತ್ತು ಇಸ್ರೇಲ್ ಈ ಕ್ರಮವನ್ನು ವಿರೋಧಿಸಿದರೆ, ಭಾರತ ಅದನ್ನು ಬೆಂಬಲಿಸಿದ ರಾಷ್ಟ್ರಗಳ ಸಾಲಿಗೆ ಸೇರಿದೆ.

************

ಏಷ್ಯಾ ಕಪ್ ಟಿ-೨೦ ಕ್ರಿಕೆಟ್‌ನಲ್ಲಿ, ಅಬುಧಾಬಿಯ ಶೇಖ್ ಜಾಯೆದ್ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಅಂತಿಮ 'ಎ' ಗುಂಪಿನ ಪಂದ್ಯದಲ್ಲಿ ಭಾರತ, ಒಮಾನ್ ತಂಡವನ್ನು ೨೧ ರನ್‌ಗಳಿಂದ ಸೋಲಿಸಿತು.ಮೊದಲು ಬ್ಯಾಟಿಂಗ್ ಮಾಡಿದ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್‌ಗಳ ನಷ್ಟಕ್ಕೆ ೧೮೮ ರನ್ ಗಳಿಸಿತು. ಸಂಜು ಸ್ಯಾಮ್ಸನ್ ೫೬ ರನ್ ಗಳಿಸಿದರೆ, ಅಭಿಷೇಕ್ ಶರ್ಮಾ ೩೮ ರನ್ ಗಳಿಸಿದರು. ಇದಕ್ಕೆ ಉತ್ತರವಾಗಿ, ಒಮಾನ್ ನಿಗದಿತ ೨೦ ಓವರ್‌ಗಳಲ್ಲಿ ೪ ವಿಕೆಟ್‌ಗಳಿಗೆ ೧೬೭ ರನ್ ಗಳಿಸಿತು. ಆಮಿರ್ ಕಲೀಮ್ ಮತ್ತು ಹಮ್ಮದ್ ಮಿರ್ಜಾ ಅರ್ಧಶತಕಗಳನ್ನು ಗಳಿಸಿದರು.

ಭಾರತ ಪರ ಹಾರ್ದಿಕ್ ಪಾಂಡ್ಯ, ಅರ್ಷದೀಪ್ ಸಿಂಗ್, ಹರ್ಷಿತ್ ರಾಣಾ ಮತ್ತು ಕುಲದೀಪ್ ಯಾದವ್ ತಲಾ ಒಂದು ವಿಕೆಟ್ ಪಡೆದರು. ಪುರುಷರ ಟಿ-೨೦ ಅಂತಾರಾಷ್ಟ್ರೀಯ ಪಂದ್ಯಗಳಲ್ಲಿ ೧೦೦ ವಿಕೆಟ್‌ಗಳನ್ನು ಪಡೆದ ಮೊದಲ ಭಾರತೀಯ ಬೌಲರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ

ಅರ್ಷದೀಪ್ ಸಿಂಗ್ ಇತಿಹಾಸ ಸೃಷ್ಟಿಸಿದರು. ಸೂಪರ್ ೪ ಹಂತದಲ್ಲಿ ಇಂದು ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಶ್ರೀಲಂಕಾ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಭಾರತ ನಾಳೆ ಇದೇ ಸ್ಥಳದಲ್ಲಿ ತನ್ನ ಮೊದಲ ಸೂಪರ್ ೪ ಪಂದ್ಯದಲ್ಲಿ ಪಾಕಿಸ್ತಾನವನ್ನು ಎದುರಿಸಲಿದೆ.

************